ಕರ್ನಾಟಕ ಸರ್ಕಾರ
**ವಿಶೇಷ ನೇಮಕಾತಿ ಸಮಿತಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು**
ಆನಂದ್‌ರಾವ್ ವೃತ್ತ, ಬೆಂಗಳೂರು

---

ಸಂಖ್ಯೆ:ಎಸ್‌ಆರ್‌ಸಿ/01-ಎಫ್/2017-18(ಕಿ.ಆ.ಸ(ಮ)) ದಿನಾಂಕ: 07-09-2018

**ವಿಶೇಷ ನೇಮಕಾತಿ ಸಮಿತಿಯಿಂದ ಕಿರಿಯ ಆರೋಗ್ಯ ಸಹಾಯಕರು(ಮಹಿಳೆ) ಹುದ್ದೆಗಳಿಗೆ ಅಂತಿಮ ಆಯ್ಕೆಪಟ್ಟಿಯಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳಿಗೆ ಸೂಚನೆಗಳು**

- ಕಿರಿಯ ಆರೋಗ್ಯ ಸಹಾಯಕರು (ಮಹಿಳೆ) ಹುದ್ದೆಗಳಿಗೆ ಅಂತಿಮ ಆಯ್ಕೆಪಟ್ಟಿಯಲ್ಲಿ ಆಯ್ಕೆಯಾಗಿ ಕರ್ನಾಟಕ ನರ್ಸಿಂಗ್ ಕೌನ್ಸಿಲ್‌ನಲ್ಲಿ ನವೀಕರಣ (Renewal) ಮಾಡಿಸದೆ ಇರುವ ಅಭ್ಯರ್ಥಿಗಳು ನವೀಕರಣ (Renewal) ಮಾಡಿಸಿಕೊಂಡಿರತಕ್ಕದ್ದು.
- ಅಂತಿಮ ಆಯ್ಕೆಪಟ್ಟಿಯಲ್ಲಿ ಪ್ರವರ್ಗಗಳಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳ ಸಿಂಧುತ್ವ ಪ್ರಮಾಣ ಪತ್ರಗಳನ್ನು ಜಾರಿ ಮಾಡುವ ಸಲುವಾಗಿ ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಈಗಾಗಲೇ ಪತ್ರ ಬರೆಯಲಾಗಿದ್ದು, ಸಂಬಂಧಪಟ್ಟ ಪ್ರಾಧಿಕಾರಿಗಳ ಕಛೇರಿಯನ್ನು ಸಂಪರ್ಕಿಸಿ ಅಗತ್ಯ ದಾಖಲೆಗಳನ್ನು ಸಲ್ಲಿಸಲು ಸೂಚಿಸಿದೆ.
- ಹೈದರಾಬಾದ್-ಕರ್ನಾಟಕ ಮೀಸಲಾತಿಯಡಿಯಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳ ಹೈ-ಕ ಸಿಂಧುತ್ವ ಪ್ರಮಾಣ ಪತ್ರಗಳನ್ನು ಜಾರಿ ಮಾಡುವ ಸಲುವಾಗಿ ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಈಗಾಗಲೇ ಇ-ಮೇಲ್ ಮೂಲಕ ಪತ್ರ ಬರೆಯಲಾಗಿದ್ದು, ಅಭ್ಯರ್ಥಿಗಳು ಹೈ-ಕ ಸಿಂಧುತ್ವ ವರದಿಯನ್ನು ಪಡೆದು ಸಲ್ಲಿಸಲು ಸಂಬಂಧಪಟ್ಟ ಪ್ರಾಧಿಕಾರಿಗಳ ಕಛೇರಿಯನ್ನು ಸಂಪರ್ಕಿಸಿ ಅಗತ್ಯ ದಾಖಲೆಗಳನ್ನು ಸಲ್ಲಿಸಲು ಸೂಚಿಸಿದೆ.
- ಅಂತಿಮ ಆಯ್ಕೆಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ಬಗ್ಗೆ ಪೊಲೀಸ್ ಪೂರ್ವಪರ ಸತ್ಯಾಪನ ವರದಿಯನ್ನು ಪಡೆಯುವ ಸಲುವಾಗಿ ಪೊಲೀಸ್ ಆಯುಕ್ತರು/ಜಿಲ್ಲಾ ಪೊಲೀಸ್ ಅಧೀಕ್ಷಕರು ಇವರಿಗೆ ಈಗಾಗಲೇ ಇ-ಮೇಲ್ ಮೂಲಕ ಪತ್ರ ಬರೆಯಲಾಗಿದೆ. ಸಂಬಂಧಪಟ್ಟ ಪೊಲೀಸ್ ಠಾಣೆ ಇವರಲ್ಲಿ ಸಂಪರ್ಕಿಸುವುದು.
- **ನೇಮಕಾತಿ ಸಂಬಂಧ ಕೌನ್ಸಿಲಿಂಗ್ ನಡೆಸುವ ದಿನಾಂಕವನ್ನು ನಿಗದಿಗೊಳಿಸಿದ ನಂತರ ಆಯ್ಕೆಯಾದ ಅಭ್ಯರ್ಥಿಗಳ ಮೊಬೈಲ್‌ಗಳಿಗೆ ಎಸ್‌ಎಂಎಸ್ ಮುಖಾಂತರ ಮತ್ತು ಇ-ಮೇಲ್ ಮುಖಾಂತರ ಕಳುಹಿಸಲಾಗುವುದು ಹಾಗೂ ಕೌನ್ಸಿಲಿಂಗ್ ವೇಳಾಪಟ್ಟಿಯನ್ನು ಅಭ್ಯರ್ಥಿಗಳ ಮಾಹಿತಿಗಾಗಿ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು.**
- ಅಂತಿಮ ಆಯ್ಕೆಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ಬಗ್ಗೆ ಸಂಬಂಧಪಟ್ಟ ಪ್ರಾಧಿಕಾರಿಗಳಿಂದ ಪೊಲೀಸ್ ಪೂರ್ವಪರ ವರದಿ/ಮೀಸಲಾತಿಯಡಿ ಆಯ್ಕೆಯಾದ ಅಭ್ಯರ್ಥಿಗಳ ಸಿಂಧುತ್ವ ವರದಿ/ಹೈ-ಕ ಸಿಂಧುತ್ವ ವರದಿಗಳು ಸ್ವೀಕೃತವಾದ ನಂತರವೇ ನೇಮಕಾತಿ ಆದೇಶವನ್ನು ನೀಡಲಾಗುವುದು.

4/9

ಮುಖ್ಯ ಆಡಳಿತಾಧಿಕಾರಿಗಳು,
ಆರೋಗ್ಯ ಮತ್ತು ಕು.ಕ.ಸೇವೆಗಳು.